5	Removal of silt in Shivalli bed pick up canal	1.00	
6	Removal of silt in Gowda Gere Minor of 12th distry. Of NMBC	0.50	
7	Removal of silt in Mandya Tank Canal	1.00	
	Total	4.50	

ಎನ್. ಆರ್. ವಿಜಯಸಾರಥಿ

ವಿಶೇಷ ಕರ್ತವ್ಯಾಧಿಕಾರಿ (ತಾಂತ್ರಿಕ-ಎಂಎಂಐ-3)

ಜಲಸಂಪನ್ಮೂಲ ಇಲಾಖೆ

ಮಂಡ್ಯ ತಾಲ್ಲೂಕು ಗ್ರಾಮೀಣ ಪ್ರದೇಶಗಳಲ್ಲಿ ಸ್ಮಶಾನ ನಿರ್ಮಿಸುವುದು

30(07) ಶ್ರೀ ಶ್ರೀನಿವಾಸ್ ಎಂ:(ಮಂಡ್ಯ) ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಂಡ್ಯ ತಾಲ್ಲೂಕಿನ ಗ್ರಾಮೀಣ ಪ್ರದೇಶಗಳಲ್ಲಿ ಶವ ಸಂಸ್ಕಾರಕ್ಕಾಗಿ ಸ್ಮಶಾನಗಳಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:

ಆ) ಬಂದಿದ್ದಲ್ಲಿ, ಶವ ಸಂಸ್ಕಾರಕ್ಕಾಗಿ ಸ್ಮಶಾನಗಳನ್ನು ನಿರ್ಮಿಸಲು ಸ್ಥಳ ಗುರುತಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ,

ಇ) ಹಾಗಿದ್ದಲ್ಲಿ, ಯಾವಾಗ ಸ್ಥಳ ಗುರುತಿಸಲಾಗುವುದು;

ಈ) ಗ್ರಾಮೀಣ ಪ್ರದೇಶಗಳಲ್ಲಿ ಹೊಸದಾಗಿ ಸ್ಮಶಾನಗಳನ್ನು ನಿರ್ಮಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಉ) ಹಾಗಿದ್ದಲ್ಲಿ, ಇದನ್ನು ನಿರ್ಮಿಸಲು ಯಾವ ಇಲಾಖೆಯ ಅಧಿಕಾರಿಗಳಿಗೆ ಅಧಿಕಾರ ನೀಡಲಾಗಿದೆ?

ಶ್ರೀ ಜಿ ಕರುಣಾಕರರೆಡ್ಡಿ(ಕಂದಾಯ ಸಚಿವರು):

ಅ) ಹೌದು, ಮಂಡ್ಯ ತಾಲ್ಲೂಕಿನ ಗ್ರಾಮೀಣ ಪ್ರದೇಶಗಳಲ್ಲಿ ಶವ ಸಂಸ್ಕಾರಕ್ಕಾಗಿ ಸ್ಮಶಾನಗಳಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆ.

ಆ) ಸ್ಮಶಾನಕ್ಕಾಗಿ ಯೋಗ್ಯ ಸರ್ಕಾರಿ ಜಮೀನು ಅಥವಾ ಹಳ್ಳಿಗೆ ಹತ್ತಿರದಲ್ಲಿರುವ ಖುಷ್ಕಿ ಜಮೀನನ್ನು ಗುರುತಿಸಲು ಕ್ರಮವಸಹಿಸಲಾಗಿದೆ.

ಇ) ಈಗಾಗಲೇ ಮಂಡ್ಯ ತಾಲ್ಲೂಕಿನಲ್ಲಿ 30 ಗ್ರಾಮಗಳಲ್ಲಿ ಸ್ಥಳ ಗುರುತಿಸಲಾಗಿದೆ.

ಈ) ಹೌದು, ಗ್ರಾಮೀಣ ಪ್ರದೇಶಗಳಲ್ಲಿ ಹೊಸದಾಗಿ ಸ್ಮಶಾನಗಳನ್ನು ನಿರ್ಮಿಸುವ ಪ್ರಸ್ತಾವನೆ ಸರ್ಕಾರದ ಮುಂದಿದ್ದು, ರುದ್ರಭೂಮಿ ಸೌಲಭ್ಯ ಕಲ್ಪಿಸುವ ಯೋಜನೆಯಡಿ ಗ್ರಾಮೀಣ ಪ್ರದೇಶಗಳಲ್ಲಿ ರುದ್ರಭೂಮಿ ಸೌಲಭ್ಯ ಕಲ್ಪಿಸಲು ಕ್ರಮವಹಿಸಲಾಗುತ್ತಿದೆ.

ಸಂಬಂಧಪಟ್ಟ ಕಂದಾಯ ಇಲಾಖೆಯ ಅಧಿಕಾರಿಗಳಿಗೆ ಅಧಿಕಾರ ನೀಡಲಾಗಿದೆ.

ಕೈಗಾರಿಕಾ ಅಭಿವೃದ್ಧಿಗಾಗಿ ಭೂಸ್ವಾಧೀನ

33(36) ಶ್ರೀ ವೆಂಕಟಶಿವಾರೆಡ್ಡಿ ಜಿ ಕೆ:(ಶ್ರೀನಿವಾಸಪುರ) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು ಉತ್ತರ ತಾಲ್ಲೂಕಿನ ಕಸಬಾ ಹೋಬಳಿ, ಹೆಬ್ಬಾಳ ಗ್ರಾಮಕ್ಕೆ ಸೇರಿದ ಜಮೀನುಗಳನ್ನು ಕೆ.ಐ.ಎ.ಡಿ.ಬಿ.ಯವರು ಕೈಗಾರಿಕಾ ಅಭಿವೃದ್ಧಿಗಾಗಿ ಪ್ರಾಥಮಿಕ ಅಧಿಸೂಚನೆ ಹೊರಡಿಸಿ ವಶಪಡಿಸಿಕೊಂಡ ಜಮೀನಿನ ವಿಸ್ತೀರ್ಣವೆಷ್ಟು (ಸರ್ವೆ ನಂಬರಿನ ಸಹಿತ ಮಾಹಿತಿ ನೀಡುವುದು);

ಆ) ಅಂತಿಮ ಅಧಿಸೂಚನೆ ಹೊರಡಿಸುವಾಗ ಕೈಬಿಡಲಾದ ಜಮೀನಿನ ವಿಸ್ತೀರ್ಣವೆಷ್ಟು (ಸರ್ವೆ ನಂಬರ್ ಮತ್ತು ವಿಸ್ತೀರ್ಣವಾರು ಸಹಿತ ಮಾಹಿತಿ ನೀಡುವುದು);

ಇ) ವಶಪಡಿಸಿಕೊಳ್ಳಲಾದ ಜಮೀನುಗಳನ್ನು ಕೈಬಿಡಲು ಕಾರಣಗಳೇನು (ಮಾಹಿತಿ ನೀಡುವುದು)

ಈ) ಜಮೀನುದಾರರಿಗೆ ಪರಿಹಾರವನ್ನು ನೀಡಲಾಗಿದೆಯೇ, (ಸರ್ವೆ ನಂಬರ್‌ವಾರು ಹಾಗೂ ವಿಸ್ತೀರ್ಣವಾರು ಮಾಹಿತಿ ನೀಡುವುದು)

ಶ್ರೀ ಮುರುಗೇಶ್ ಆರ್ ನಿರಾಣಿ(ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರು):

ಅ) ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು ಉತ್ತರ ತಾಲ್ಲೂಕಿನ ಕಸಬಾ ಹೋಬಳಿ, ಹೆಬ್ಬಾಳ ಹಾಗೂ ಹೆಬ್ಬಾಳ ಅಮಾನಿಕೆರೆ ಗ್ರಾಮಗಳಿಗೆ ಸೇರಿದ